# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಬಿ.ಬಿ.ಕುಲಕರ್ಣಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಯಚೂರು ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ಲೋಕಾಯುಕ್ತಕ್ಕೆ ವಹಿಸುವ ಬಗ್ಗೆ.

**ಓದಲಾಗಿದೆ:** ಅಪರ ನಿಬಂಧಕರು, ವಿಚಾರಣೆಗಳು-6 ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ/ಜಿಎಲ್‌ಬಿ-634/2012/ ಎಆರ್‌ಇ-6 ದಿನಾಂಕ:17-08-2012

****

**ಪ್ರಸ್ತಾವನೆ:**

ಶ್ರೀ ಎನ್. ಶಂಕರಪ್ಪ, ಅಧ್ಯಕ್ಷರು, ನೇತಾಜಿ ಸುಭಾಷಚಂದ್ರ ಭೋಸ್, ಯುವಕ ಮಂಡಳಿ, ಜಾಗೀರ್, ವೆಂಕಟಪುರ ಅಂಚೆ, ರಾಯಚೂರು ತಾಲ್ಲೂಕು ಇವರು ಜಾಗೀರ್ ವೆಂಕಟಾಪುರ ಗ್ರಾಮ ಪಂಚಾಯತಿಯಲ್ಲಿ ಅದಕ್ಷ ಆಡಳಿತ ಹಾಗೂ ಅವ್ಯವಹಾರ ನಡೆಯುತ್ತಿದ್ದು, ಈ ಬಗ್ಗೆ ತನಿಖೆ ಜರುಗಿಸುವಂತೆ ಶ್ರೀ ಮುಕ್ಕಣ್ಣ ಕರಿಗಾರ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ(ಪ್ರಭಾರ), ಜಿಲ್ಲಾ ಪಂಚಾಯತಿ, ರಾಯಚೂರು ಮತ್ತು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು ಇವರಿಗೆ ಹಲವು ಬಾರಿ ಮನವಿ ಮಾಡಿದ್ದರೂ, ಯಾವುದೇ ತನಿಖೆ ಮಾಡಿಲ್ಲವೆಂದು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿನ ಪ್ರತಿಯನ್ನು ಶ್ರೀ ಬಿ.ಬಿ.ಕುಲಕರ್ಣಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಯಚೂರು ಇವರಿಗೆ ದಿನಾಂಕ:01-12-2011 ರ ಪತ್ರದೊಂದಿಗೆ ಕಳುಹಿಸಿ ವರದಿ ಸಲ್ಲಿಸಲು ಕರ್ನಾಟಕ ಲೋಕಾಯುಕ್ತ ಕಛೇರಿಯಿಂದ ಸೂಚಿಸಿ ಮತ್ತು ದಿನಾಂಕ:28-12-2011 ರಂದು ನೆನಪೋಲೆಯನ್ನು ಕಳುಹಿಸಿ ದಿನಾಂಕ:25-01-2012 ರೊಳಗೆ ವರದಿಯನ್ನು ಸಲ್ಲಿಸುವಂತೆ ಸೂಚಿಸಿತ್ತು. ದಿನಾಂಕ:25-01-2012, 07-03-2012, 05-04-2012 ರಂದು ಕಾರಣ ಕೇಳುವ ನೋಟೀಸನ್ನು ನೀಡಿ ಈ ಬಗ್ಗೆ ವಿವರಣೆ ಸಲ್ಲಿಸುವಂತೆ ಸೂಚಿಸಿತ್ತು. ಅದರೆ ಈ ಅಧಿಕಾರಿಯು ವರದಿ ಸಲ್ಲಿಸದೆ ಬೇಜವಾಬ್ದಾರಿತನ ತೋರಿರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಶಿಫಾರಸ್ಸು ಮಾಡಿರುವುದಾಗಿ ಅಪರ ನಿಬಂಧಕರು, ವಿಚಾರಣೆಗಳು-6 ಇವರು ಮೇಲೆ ಓದಲಾದ ದಿನಾಂಕ:17-08-2012ರ ಪತ್ರದಲ್ಲಿ ಕೋರಿರುತ್ತಾರೆ.

ಉಪ ಲೋಕಾಯುಕ್ತರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಮೇಲ್ಕಂಡ ಅಧಿಕಾರಿ ದೂರುದಾರರು ಸಲ್ಲಿಸಿದ ಮನವಿಯ ಬಗ್ಗೆ ಕ್ರಮ ವಹಿಸಲು ವಿಫಲರಾಗಿರುವುದು ಕಂಡು ಬರುವುದರಿಂದ, ಅವರ ವಿರುದ್ಧ ಮಾಡಿರುವ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಉಪ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:164 :ವಿಸೇಬಿ:2012 ಬೆಂಗಳೂರು ದಿನಾಂಕ:10-10-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಬಿ.ಬಿ.ಕುಲಕರ್ಣಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಯಚೂರು ಇವರ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಗಳು 1957ರ ನಿಯಮ 14(ಎ) ರ ಪ್ರಕಾರ ಪ್ರಕರಣವನ್ನು ಉಪ ಲೋಕಾಯುಕ್ತ-I ರವರಿಗೆ ವಹಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಗೆ:

1)ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ ಇಲಾಖೆ, ಬೆಂಗಳೂರು.
3) ಉಪ ಲೋಕಾಯುಕ್ತರು-I, ಕರ್ನಾಟಕ ಲೋಕಾಯುಕ್ತರ ಕಛೇರಿ, ಬೆಂಗಳೂರು
4)ಅಪರ ನಿಬಂಧಕರು, ವಿಚಾರಣೆಗಳು-6 ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು.
5)ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು,
6)ಸಂಬಂಧಪಟ್ಟ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ. ರಾಯಚೂರು ಇವರ ಮುಖಾಂತರ)
7)ಸರ್ಕಾರದ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ-1) ಗ್ರಾ.ಅ.ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
8)ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ
9)ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ.